ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 3 ಜಿಆರ್‌ಟಿ(2) 2018.

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು 560 001.
ದಿನಾಂಕ: 5-6-2018.

ಇವರಿಗೆ,

ಪ್ರಿನ್ಸಿಪಾಲರು,
1.ಜಯಚಾಮರಾಜೇಂದ್ರ ಕಾಲೇಜ್ ಆಫ್ ಇಂಜಿನೀಯರಿಂಗ್
ಮೈಸೂರು.
2.ನ್ಯಾಷನಲ್ ಇನ್ಸ್ಟ್ಯೂಟ್ ಆಫ್ ಇಂಜಿನೀಯರಿಂಗ್,
ಮೈಸೂರು.

ಮಾನ್ಯರೆ,

ವಿಷಯ: 'ಸ್ಟೇಟ್ ಬ್ಯಾಂಕ್ ಆಫ್ ಮೈಸೂರು' ಮೂಲಕ "ಇಸಿಎಸ್" ಅಳವಡಿಸಿ ನೇರವಾಗಿ ಸಿಬ್ಬಂದಿ ವರ್ಗದವರಿಗೆ ಸರ್ಕಾರದ ಪಾಲಿನ ಸಹಾಯನುದಾನವನ್ನು ವಿತರಿಸುವ ಬಗ್ಗೆ.

ಸರ್ಕಾರದ ಆದೇಶ ಇಡಿ 184 ಟಿಪಿಇ 2009 ದಿ:27-7-2009 ರಲ್ಲಿ ಸರ್ಕಾರವು ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಖಾಸಗಿ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಪಾಲಿಟೆಕ್ನಿಕ್‌ಗಳ ಸಿಬ್ಬಂದಿಗಳಿಗೆ ಸರ್ಕಾರದಿಂದ ಬಿಡುಗಡೆ ಮಾಡುವ ಸಹಾಯನುದಾನವನ್ನು ಪ್ರತೀ ತಿಂಗಳು ರಾಷ್ಟ್ರೀಕೃತ ಬ್ಯಾಂಕ್ 'ಸ್ಟೇಟ್ ಬ್ಯಾಂಕ್ ಆಫ್ ಮೈಸೂರು' ನಲ್ಲಿ ಸಿಬ್ಬಂದಿ ವರ್ಗದವರ (ಬೋಧಕ ಮತ್ತು ಬೋಧಕೇತರ) ಖಾತೆಗೆ ಜಮೆ ಮಾಡುವ ಮೂಲಕ ವಿತರಿಸಲು ಸರ್ಕಾರವು ಅನುಮತಿಸಿರುತ್ತದೆ. ಹಾಗೂ ಈ ಸಂಬಂಧ ಮುಂದಿನ ಅಗತ್ಯಕ್ರಮವನ್ನು ತಾಂತ್ರಿಕ ಶಿಕ್ಷಣ ನಿರ್ದೇಶಕರು ಕೈಗೊಳ್ಳಲು ಆದೇಶಿಸಿರುತ್ತದೆ.

ಮುಂದುವರೆದು ಸರ್ಕಾರದ ಪತ್ರ ಸಂಖ್ಯೆ: ಇಡಿ 368 ಟಿಪಿಇ 2010 ದಿ: 16-5-2012 ರಲ್ಲಿ 'ಸ್ಟೇಟ್ ಬ್ಯಾಂಕ್ ಆಫ್ ಮೈಸೂರು' ನೋಡಲ್ ಬ್ಯಾಂಕ್ ಎಂದು ಸ್ಪಷ್ಟೀಕರಣ ನೀಡಲಾಗಿದೆ.

ಈ ಸಂಬಂಧ ಇಲಾಖೆಯು ತನ್ನ ಅಧೀನಕ್ಕೆ ಒಳಪಟ್ಟಿರುವ ಎಲ್ಲಾ ಅನುದಾನಿತ ಸಂಸ್ಥೆಗಳಿಗೆ, 'ಸ್ಟೇಟ್ ಬ್ಯಾಂಕ್ ಆಫ್ ಮೈಸೂರು' ಶಾಖೆಗಳಲ್ಲಿ ಸಿಬ್ಬಂದಿ ವರ್ಗದವರ ಹಾಗೂ ಪ್ರಾಂಶುಪಾಲರ ಹೆಸರಿನಲ್ಲಿ ಪ್ರತ್ಯೇಕ ಉಳಿತಾಯ ಖಾತೆಗಳನ್ನು ತೆರೆಯುವಂತೆ ಹಲವಾರು ಬಾರಿ ಸೂಚನೆಯನ್ನು ನೀಡಿದ್ದು ಮತ್ತು ಸಾಕಷ್ಟು ಕಾಲವಕಾಶವನ್ನು ನೀಡಿದ್ದರು ಸಹ ಇದುವರೆವಿಗೂ ತಮ್ಮ ಸಂಸ್ಥೆಯಿಂದ ಯಾವುದೇ ಕ್ರಮ ಜರುಗಿಸಿರುವುದಿಲ್ಲ.

ಆದ್ದರಿಂದ ಈ ಕೂಡಲೇ ತಮ್ಮ ಸಿಬ್ಬಂದಿವರ್ಗದವರ ಖಾತೆಗಳನ್ನು 'ಸ್ಟೇಟ್ ಬ್ಯಾಂಕ್ ಆಫ್ ಇಂಡಿಯ' ನಲ್ಲಿ ತೆರದು ಬಿಲ್ಲನ್ನು 'ಇಸಿಎಸ್' ಪದ್ದತಿಯಲ್ಲಿ ಸಲ್ಲಿಸಿ ಸಹಾಯನುದಾನವನ್ನು ಪಡೆಯಬೇಕೆಂದು ತಿಳಿಸಲಾಗಿದೆ.ತಪ್ಪಿದಲ್ಲಿ ಸಹಾಯನುದಾನ ಬಿಡುಗಡೆಯನ್ನು ಸ್ಥಗಿತಗೊಳಿಸಲಾಗುವುದು ಹಾಗೂ ಈ ಸಂಬಂಧ ಮುಂದಿನ ಆಗು ಹೋಗುಗಳಿಗೆ ಪ್ರಿನ್ಸಿಪಾಲರೇ ನೇರ ಹೊಣೆಗಾರರಾಗಿರುತ್ತಾರೆ ಎಂದು ಈ ಮೂಲಕ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ

ನಿರ್ದೇಶಕರು